# Visvesvaraya Technological University

"Jnana Sangama"

Belagavi - 590 018, Karnataka State

**Dr. Satish Annigeri**
**REGISTRAR(I/C)**

Phone : (0831) 2498100
Fax : (0831) 2405467


**Ref: VTU/BGM/Aca-OS/Gen-Cir/2018-19/ 11130** **Date :** 20 MAR 2019

## ಸುತ್ತೋಲೆ

ವಿಷಯ : ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ. ೩ನೇ ಸೆಮಿಸ್ಟರ್ ಪ್ರವೇಶಕ್ಕೆ ಆಡಳಿತ ಮಂಡಳಿಗಳಲ್ಲಿ ಸ್ವೀಕೃತವಾಗುವ ಅರ್ಜಿಗಳ ಪರಿಶೀಲನೆ ಮಾಡುವ ಕಾರ್ಯಕ್ಕೆ ಶುಲ್ಕ ನಿಗದಿಪಡಿಸುವ ಕುರಿತು

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ ಇಡಿ ೨೧೦ ಟೆಇಸಿ ೨೦೧೮ ದಿ: ೨೬-೦೨-೨೦೧೯

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ ಇಡಿ ೨೧೦ ಟೆಇಸಿ ೨೦೧೮ ದಿ: ೨೬-೦೨-೨೦೧೯ಯನ್ನು ಲಗತ್ತಿಸಲಾಗಿದೆ. ಕಾರಣ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲ ಕಾಲೇಜುಗಳು ಸದರಿ ಸರ್ಕಾರಿ ಸುತ್ತೋಲೆಯಲ್ಲಿ ನಮೂದಿಸಿದ ಅಂಶಗಳಂತೆ ಗಮನಿಸಿ, ಸೂಕ್ತ ಕ್ರಮ ಜರುಗಿಸಲು ಹಾಗೂ ಸಂಬಂದಿಸಿದವರಿಗೆ ಮಾಹಿತಿ ನೀಡಲು ಈ ಮೂಲಕ ತಿಳಿಸಲಾಗಿದೆ.

**ಅಡಕ: ಮೇಲಿನಂತೆ**

**ಕುಲಸಚಿವರು**
**ವಿ.ತಾ.ವಿ. ಬೆಳಗಾವಿ**

20/3/19

**ಇವರಿಗೆ,**
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ಅಧೀನ ಮಹಾವಿದ್ಯಾಲಯಗಳ (ಸಂಯೋಜಿತ, ಸ್ವಾಯತ್ತ ಹಾಗೂ ಘಟಕ) ಪ್ರಾಂಶುಪಾಲರಿಗೆ

**ಪ್ರತಿ ಮಾಹಿತಿಗಾಗಿ:**

೧. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧

೫. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧

೬. ಕುಲಪತಿಗಳ ಕಾರ್ಯದರ್ಶಿಗಳು, ವಿತಾವಿ, ಬೆಳಗಾವಿ

೭. ಸಿಎನ್‌ಸಿ ಘಟಕವಿತಾವಿ, ಬೆಳಗಾವಿ

Visvesvaraya Technological University Inward 12946 2019

VTU, ... 05 MAR 2019 Inward No.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ ಮೂರನೇ ಸೆಮಿಸ್ಟರ್ ಪ್ರವೇಶಕ್ಕೆ ಆಡಳಿತ ಮಂಡಳಿಗಳಲ್ಲಿ ಸ್ವೀಕೃತವಾಗುವ ಅರ್ಜಿಗಳ ಪರಿಶೀಲನೆ ಮಾಡುವ ಕಾರ್ಯಕ್ಕೆ ಶುಲ್ಕ ನಿಗದಿಪಡಿಸುವ ಕುರಿತು.

Visvesvaraya Technological University V.C.'s Secretariat 8/5/3/19 BELAGAVI

ಓದಲಾಗಿದೆ:-

ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿಆರ್-13/ಭಾಗ-2018, ದಿನಾಂಕ:10.10.2018.

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ ಕೋರ್ಸುಗಳ ಎರಡನೇ ವರ್ಷ/ಮೂರನೇ ಸೆಮಿಸ್ಟರ್ ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಹ ಡಿಪ್ಲೋಮೊ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿ ಅಧಿಸೂಚನೆ ಹೊರಡಿಸಲು ಹಾಗೂ ಅರ್ಹ ಡಿಪ್ಲೋಮೊ ಅಭ್ಯರ್ಥಿಗಳಿಂದ ಅರ್ಜಿಯನ್ನು ನೇರವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವೇ ಪಡೆಯಲು. ಡಿಪ್ಲೋಮೊದಾರಕರುಗಳಿಗೆ ಸಿಇಟಿ ಪರೀಕ್ಷೆ ನಡೆಸಿ ಅಭ್ಯರ್ಥಿಯ ಅರ್ಹತಾ ಪರೀಕ್ಷೆ ಹಾಗೂ ಸಿಇಟಿ ಯಲ್ಲಿ ಪಡೆದ ಅಂಕಗಳನ್ನು ಸಮಾನವಾಗಿ ಪರಿಗಣಿಸಿ ಸರ್ಕಾರಿ ಸೀಟುಗಳಿಗೆ ಮೇರಿಟ್ ಪಟ್ಟಿ ತಯಾರಿಸಿ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಪ್ರಾಧಿಕಾರದ ವತಿಯಿಂದ ಕೌನ್ಸಿಲಿಂಗ್ ಮೂಲಕ ನಡೆಸಿ ಸೀಟು ಹಂಚಿಕೆ ಮಾಡುತ್ತಿರುತ್ತದೆ.

ಮೂರನೇ ಸೆಮಿಸ್ಟರ್ ನ ಬಿ.ಇ ಪ್ರವೇಶಕ್ಕೆ ಸಂಬಂಧಿಸಿದಂತೆ. ಖಾಲಿ ಉಳಿದ ಸೀಟುಗಳಿಗೆ ಆಡಳಿತ ಮಂಡಳಿಗಳಲ್ಲಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪ್ರಾಧಿಕಾರವು ಪರಿಶೀಲಿಸಬೇಕಿದ್ದು, ಸ್ವೀಕೃತವಾದ ಅರ್ಜಿಗಳನ್ನು ಆಡಳಿತ ಮಂಡಳಿಗಳು ಪ್ರಾಧಿಕಾರಕ್ಕೆ ಸಲ್ಲಿಸುತ್ತಿದ್ದು. ಎಲ್ಲಾ ಅರ್ಜಿಗಳಲ್ಲಿನ ಎಲ್ಲಾ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸಲು ಸಾಕಷ್ಟು ಸಿಬ್ಬಂದಿಗಳ ಅವಶ್ಯಕತೆ ಇದ್ದು, ಇದರಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸಿಬ್ಬಂದಿ ಪಡೆಯುವಲ್ಲಿ ಮತ್ತು ದಾಖಲೆಗಳನ್ನು ಪರಿಶೀಲಿಸುವಲ್ಲಿ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುತ್ತಿರುತ್ತದೆ.

ಈ ರೀತಿ ಖಾಸಗಿ ಆಡಳಿತ ಮಂಡಳಿಗಳಲ್ಲಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಶೀಲಿಸುವ ಕಾರ್ಯಕ್ಕೆ ಪ್ರತಿ ಅಭ್ಯರ್ಥಿಗೆ ಕನಿಷ್ಠ ರೂ.500/-ರಂತೆ ಶುಲ್ಕವನ್ನು ಆಯಾ ಆಡಳಿತ ಮಂಡಳಿಗಳಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪಾವತಿಸುವ ಬಗ್ಗೆ ಮತ್ತು ಈ ಸಂಬಂಧ ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಕರಣದಲ್ಲಿನ ಸನ್ನಿವೇಶ, ಸಂದರ್ಭ ಮತ್ತು ದಾಖಲೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 210 ಟಿಇಸಿ 2018**
**ಬೆಂಗಳೂರು, ದಿನಾಂಕ: 26ನೇ ಫೆಬ್ರವರಿ 2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಡಿಪ್ಲೋಮೊದಾರಕರುಗಳಿಂದ/ ಬಿ.ಎಸ್ಸಿ ಪದವಿದಾರರುಗಳಿಂದ ಮೂರನೇ ಸೆಮಿಸ್ಟರ್ ನ ಬಿ.ಇ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರಾಧಿಕಾರದಿಂದ ಹಂಚಿಕೆಗೊಂಡು ತದನಂತರ ಖಾಲಿ ಉಳಿಯುವ ಸೀಟುಗಳಿಗೆ ಆಡಳಿತ ಮಂಡಳಿಗಳಲ್ಲಿ

Reg 5.3.19

5/3/19

Copy to Region (concerned)

ಸ್ವೀಕೃತವಾಗುತ್ತಿರುವ ಅರ್ಜಿಗಳನ್ನು ಹಾಗೂ ಅರ್ಜಿಗಳೊಂದಿಗೆ ಲಗತ್ತಿಸಲಾದ ದಾಖಲೆಗಳನ್ನು ಪರಿಶೀಲಿಸುವ ಕಾರ್ಯಕ್ಕೆ ಪ್ರತಿ ಅಭ್ಯರ್ಥಿಗೆ ಕನಿಷ್ಠ ರೂ.500/-(ಐದು ನೂರು ರೂಪಾಯಿಗಳು ಮಾತ್ರ) ಗಳಂತೆ ಶುಲ್ಕವನ್ನು ಆಯಾ ಖಾಸಗಿ ಆಡಳಿತ ಮಂಡಳಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪಾವತಿಸುವಂತೆ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

28/2/19

**(ಮನೋರಮ ಡಿ.ಸಿ)**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).**

28/2/19

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಕಳುಹಿಸಿ ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಗಂಗೋತ್ರಿ, ಬೆಳಗಾಂ./ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಧ್ಯಕ್ಷರು, ಕರ್ನಾಟಕ ಅನುದಾನರಹಿತ ಖಾಸಗಿ ಇಂಜನಿಯರಿಂಗ್ ಕಾಲೇಜುಗಳ ಸಂಘ, ಕಾಮೆಡ್-ಕೆ ಕಛೇರಿ ಆವರಣ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ಅಧ್ಯಕ್ಷರು, ಕರ್ನಾಟಕ ಭಾಷಾ ಮತ್ತು ಮತೀಯ ಅಲ್ಪಸಂಖ್ಯಾತ ವೃತ್ತಿಪರ ಕಾಲೇಜುಗಳ ಸಂಘ, ಫ್ಲಾಟ್ ನಂ.143, 4ನೇ ಮಹಡಿ, ಸೂರ್ಯಮುಖಿ ಗಾರ್ಡನ್ ಅಪಾರ್ಟ್‌ಮೆಂಟ್, #21, ವಿಠ್ಠಲ ಮಲ್ಯ ರಸ್ತೆ, ಬೆಂಗಳೂರು-560001.
6. ಎಲ್ಲಾ ಸರ್ಕಾರಿ / ವಿಶ್ವವಿದ್ಯಾಲಯ / ಅನುದಾನಿತ / ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).
7. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
8. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ
10. ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ) ರವರ ಆಪ್ತ ಸಹಾಯಕರು.
11. ಪತ್ರಿಕಾ ಮೇಜು.
12. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
13. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.